# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 80 (711) |
| ಸದಸ್ಯರ ಹೆಸರು | ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.12.2020 |
| ಉತ್ತರಿಸಬೇಕಾದ ಸಚಿವರು | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸುಮಾರು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇಮಕ ಮಾಡಲು ಸರ್ಕಾರ ನಿರ್ಧಾರ ಕೈಗೊಂಡಿದೆಯೇ; ಹಾಗಿದ್ದಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆಯೇ; | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಲ್ಲಿ 1242 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/257/ಡಿಸಿಇ/2019(ಭಾ-3) ದಿನಾಂಕ:08.07.2020 ರಲ್ಲಿ ಅಂತಿಮ ವಿಶೇಷ ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿದೆ.<br><br>ಪ್ರಸ್ತುತ ಕೋವಿಡ್-19 ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ/03/ಬಿಇಎಂ/2020, ದಿ:06.07.2020 ರನ್ವಯ 2020-21 ನೇ ಸಾಲಿನಲ್ಲಿ ಯಾವುದೇ ನೇರ ನೇಮಕಾತಿಯನ್ನು ಕೈಗೊಳ್ಳಲು ಅವಕಾಶವಿರುವುದಿಲ್ಲ. |
| (ಆ) | ಈ ನೇಮಕಾತಿ ಮಾಡಿಕೊಳ್ಳುವಲ್ಲಿ ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು) | ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಆಧ್ಯತೆ ನೀಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಹಾಗೂ ಯು.ಜಿ.ಸಿ. ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಇ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2015ರ ಅಧಿಸೂಚನೆ ಮೇರೆಗೆ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಕಾಯ್ದಿರಿಸಿದ ಪಟ್ಟಿಯಲ್ಲಿ ಉಳಿದಿರುವ ಸುಮಾರು 44 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಆದೇಶ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ? | 2015ರ ಅಧಿಸೂಚನೆ ಮೇರೆಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಹೆಚ್ಚುವರಿ ಆಯ್ಕೆ ಪಟ್ಟಿಯಿಂದ ಲಭ್ಯವಿರುವ ಅರ್ಹ ಅಭ್ಯರ್ಥಿಗಳನ್ನು ಜೇಷ್ಠತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಿದ್ದು, ಅಧಿಸೂಚನೆ ಹೊರಡಿಸುವ ಕುರಿತು ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಮರುಮಂಡಿಸಲು ತಿಳಿಸಿರುತ್ತದೆ. |

ಇಡಿ 230 ಡಿಸಿಇ 2020

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)